# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1071 |
| ಸದಸ್ಯರ ಹೆಸರು | ಶ್ರೀ ಸಿ.ಆರ್.ಮನೋಹರ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 19.12.2018 |
| ಉತ್ತರಿಸುವ ಸಚಿವರು | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಸಕ್ಕರೆ ಹಾಗೂ ಮಾಹಿತಿ ತಂತ್ರಜ್ಞಾನ ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು. |

| ಪ್ರಶ್ನೆಗಳು | ಉತ್ತರಗಳು |
|---|---|
| ಅ) ರಾಜ್ಯದಲ್ಲಿ ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ತಂತ್ರಜ್ಞಾನ ಇಲಾಖೆ ವ್ಯಾಪ್ತಿಗೆ ಬರುವ ಸಂಸ್ಥೆಗಳು /ಕಾರ್ಖಾನೆ/ ಐ.ಟಿ ಮತ್ತು ಬಿ.ಟಿ ವಲಯಗಳಾವುವು; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು) | ರಾಜ್ಯದಲ್ಲಿ ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ತಂತ್ರಜ್ಞಾನ ಇಲಾಖೆಯ ವ್ಯಾಪ್ತಿಗೆ ಈ ಕೆಳಕಂಡ ಸಂಸ್ಥೆಗಳು ಐ.ಟಿ ಮತ್ತು ಬಿ.ಟಿ ವಲಯಗಳು ಬರುತ್ತವೆ. (see table below) |
| ಆ) ಈ ಸಂಸ್ಥೆಗಳಿಗೆ ಇಲಾಖೆಯಿಂದ ವಿಧಿಸಲಾಗಿರುವ ನಿಯಮಗಳಾವುವು, ಹಾಗೂ ಸಂಸ್ಥೆಗಳು ಪಾಲಿಸಬೇಕಾದ ಮಾನದಂಡಗಳ ಸಂಪೂರ್ಣ ಮಾಹಿತಿ ನೀಡುವುದು; | ಈ ಸಂಸ್ಥೆಗಳಿಗೆ ಇಲಾಖೆಯಿಂದ ಯಾವುದೇ ನಿಯಮಗಳನ್ನು ಹಾಗೂ ಮಾನದಂಡಗಳನ್ನು ವಿಧಿಸಿರುವುದಿಲ್ಲ. ಆದರೆ ಈ ಸಂಸ್ಥೆಗಳು ಸರ್ಕಾರದ ಯೋಜನೆಗಳನ್ನು ಇಲಾಖೆಯ ಮೂಲಕ ಅನುಷ್ಠಾನಕ್ಕೆ ತರುವ ಸಂಸ್ಥೆಗಳಾಗಿದ್ದು, ಸದರಿ ಸಂಸ್ಥೆಗಳಿಗೆ ಅನುದಾನವನ್ನು ಒದಗಿಸಲಾಗುತ್ತಿದ್ದು, ಸದರಿ ಅನುದಾನಗಳನ್ನು ಬಳಕೆ ಮಾಡುವ ಸಂದರ್ಭದಲ್ಲಿ ಸರ್ಕಾರದಿಂದ ಹೊರಡಿಸುವ ಆದೇಶಗಳನ್ನು ನಿಯಮಾನುಸಾರ ಪಾಲಿಸುವಂತೆ ಸೂಚಿಸಲಾಗುತ್ತದೆ. |
| ಇ) ಕಳೆದ 3 ವರ್ಷಗಳಲ್ಲಿ ಯಾವ ಯಾವ ಸಂಸ್ಥೆಗಳಿಂದ ನಿಯಮ ಉಲ್ಲಂಘನೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಉಲ್ಲಂಘನೆ ಮಾಡಿದ ಸಂಸ್ಥೆಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು: (ಉಲ್ಲಂಘನೆಯ ವಿವರಗಳೊಂದಿಗೆ ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು) | ಇಂತಹ ಯಾವುದೇ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |

| ಕ್ರ. ಸಂ | ಸಂಸ್ಥೆಯ ಹೆಸರು | ಜಿಲ್ಲೆ |
|---|---|---|
| 1 | ಕಿಯೋನಿಕ್ಸ್ ನಿಗಮ | ಬೆಂಗಳೂರು |
| 2 | ಕಿಟ್ಸ್ ಸಂಸ್ಥೆ | ಬೆಂಗಳೂರು |
| 3 | ಐಬಿಎಬಿ | ಬೆಂಗಳೂರು |
| 4 | ಮಾನವ ತಳಿಶಾಸ್ತ್ರ ಕೇಂದ್ರ | ಬೆಂಗಳೂರು |
| 5 | ಬೆಂಗಳೂರು ಬಯೋ ಇನ್ನೋವೇಷನ್ ಸೆಂಟರ್ | ಬೆಂಗಳೂರು |
| 6 | ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯಿಕ ಕೇಂದ್ರ | ಬೆಂಗಳೂರು |
| 7 | ಐಐಐಟಿ–ಬಿ | ಬೆಂಗಳೂರು |
| 8 | ಐಐಐಟಿ–ಡಿ | ಧಾರವಾಡ |

**ಐಟಿಡಿ 68 ಎಲ್‌ಸಿಎಂ 2018**

(ಕೆ. ಜೆ. ಜಾರ್ಜ್)
ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ
ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.